**<u>ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂ. ರವರ ನ್ಯಾಯಾಲಯ, ನಂಜನಗೂಡು</u>**

**<u>ಸಿಸಿ ಸಂಖ್ಯೆ : 2992/2021</u>**

ಫಿರ್ಯಾದುದಾರರು : ಹುಲ್ಲಹಳ್ಳಿ ಪೊಲೀಸ್ ಠಾಣೆ, ನಂಜನಗೂಡು.

**ವಿರುದ್ಧ**

ಆರೋಪಿತರು : ಶಿವರಾಜು ಬಿನ್ ಮೃತ ತಮ್ಮೇಗೌಡ,
ವಯಸ್ಸು ಸುಮಾರು 45 ವರ್ಷ,
ವಾಸಃ ಸಿದ್ದೇಗೌಡನಹುಂಡಿ ಗ್ರಾಮ,
ನಂಜನಗೂಡು ತಾಲ್ಲೂಕು, ಮೈಸೂರು ಜಿಲ್ಲೆ.

:: **<u>ದೋಷಾರೋಪಣೆ</u>** ::

*ಶ್ರೀ ರಘುರಾಮ ಎನ್. ಎಸ್.,* ಪ್ರಧಾನ ಸಿವಿಲ್ ನ್ಯಾಯಾಧೀಶರು ಹಾಗೂ ಜೆ.ಎಂ.ಎಫ್.ಸಿ., ನಂಜನಗೂಡು ಆದ ನಾನು ಮೇಲ್ಕಂಡ ಆರೋಪಿಗಳಾದ ನಿಮ್ಮ ಮೇಲೆ ಈ ಕೆಳಕಂಡಂತೆ ಆರೋಪಗಳನ್ನು ನಿರೂಪಿಸುತ್ತಿದ್ದೇನೆ.

ದಿನಾಂಕ 04.11.2020 ರಂದು ಬೆಳಿಗ್ಗೆ 11.30 ಗಂಟೆ ಸಮಯದಲ್ಲಿ ನಂಜನಗೂಡಿನ ಹುಲ್ಲಹಳ್ಳಿ ಪೊಲೀಸ್ ಠಾಣಾ ಸರಹದ್ದಿಗೆ ಸೇರಿದ ಸಿದ್ದೇಗೌಡನಹುಂಡಿ ಗ್ರಾಮದಲ್ಲಿರುವ ಚಾಸಾ-2 ರವರ ಮನೆಯಲ್ಲಿ ಚಾಸಾ-1 ರವರು ಒಬ್ಬಳೇ ಇರುವಾಗ, ಆರೋಪಿತರಾದ ತಾವು ಏಕಾಏಕಿ ಚಾಸಾ-2 ರವರ ವಾಸದ ಮನೆಗೆ ಅಕ್ರಮ ಪ್ರವೇಶ ಮಾಡಿದ್ದರಿಂದ ತಾವು ಭಾರತೀಯ ದಂಡ ಸಂಹಿತೆ ಕಲಂ 448 ರಡಿಯಲ್ಲಿ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞತೆಯಲ್ಲಿ ಎಸಗಿರುತ್ತೀರೆಂದು ನಿಮ್ಮ ಮೇಲೆ ಆಪಾದಿಸಲಾಗಿದೆ.

ಎರಡನೆಯದಾಗಿ, ಅದೇ ದಿನ, ವೇಳೆ ಹಾಗೂ ಅದೇ ಸ್ಥಳದಲ್ಲಿ ಆರೋಪಿತರಾದ ತಾವು ಏಕಾಏಕಿ ಚಾಸಾ-2 ರವರ ಮನೆಗೆ ನುಗ್ಗಿ ಚಾಸಾ-1 ರವರನ್ನು ತಬ್ಬಿಹಿಡಿದುಕೊಂಡು ಎಲ್ಲಿಗೂ ಹೋಗಲು ಬಿಡದೆ ಚಾಸಾ-1 ರವರಿಗೆ ಅಕ್ರಮ ತಡೆಯುಂಟು ಮಾಡಿರುವ ಕಾರಣ ತಾವು ಭಾರತೀಯ ದಂಡ ಸಂಹಿತೆ

ಕಲಂ 341  ರಡಿಯಲ್ಲಿ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞೆತೆಯಲ್ಲಿ ಎಸಗಿರುತ್ತೀರೆಂದು ನಿಮ್ಮ ಮೇಲೆ ಆಪಾದಿಸಲಾಗಿದೆ.

ಮೂರನೆಯದಾಗಿ, ಅದೇ ದಿನ, ವೇಳೆ ಹಾಗೂ ಅದೇ ಸ್ಥಳದಲ್ಲಿ ಆರೋಪಿತರಾದ ತಾವು ಚಾಸಾ-1 ರವರ ರವಿಕೆಯನ್ನು ಹಿಡಿದು ಎಳೆದು ಹರಿದು ಹಾಕಿ, ಸೀರೆಯನ್ನು ಹಿಡಿದು ಎಳೆದಾಡಿ ಆಕೆಗೆ ಮಾನಭಂಗ ಮಾಡುವ ಉದ್ದೇಶದಿಂದ ಅಪರಾಧಿಕ ಬಲ ಪ್ರಯೋಗ ಮಾಡಿದ್ದರಿಂದ ತಾವು ಭಾರತ ದಂಡ ಸಂಹಿತೆಯ ಕಲಂ 354 ರಡಿಯಲ್ಲಿ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞೆತೆಯಲ್ಲಿ ಎಸಗಿರುತ್ತೀರೆಂದು ನಿಮ್ಮ ಮೇಲೆ ಆಪಾದಿಸಲಾಗಿದೆ.

ನಾಲ್ಕನೆಯದಾಗಿ, ಅದೇ ದಿನ, ವೇಳೆ ಹಾಗೂ ಅದೇ ಸ್ಥಳದಲ್ಲಿ ಚಾಸಾ-2 ರವರು ಮನೆಗೆ ಬಂದಾಗ,  ಆರೋಪಿತರಾದ ತಾವು ಚಾಸಾ-1 ರವರಿಗೆ ಸೂಳೆಮಗಳೇ, ಬೋಳಿಮಗಳೇ ಎಂದು ಅವಾಚ್ಯ ಪದಗಳಿಂದ ಬೈದು, ಅವಮಾನಮಾಡಿ, ಶಾಂತಿಯನ್ನು ಭಂಗಮಾಡಿದ ಕಾರಣ, ತಾವು ಭಾರತ ದಂಡ ಸಂಹಿತೆಯ ಕಲಂ 509 ರಡಿಯಲ್ಲಿ ಶಿಕ್ಷಾರ್ಹವಾದ ಅಪರಾಧವೆಸಗಿರುವಿರೆಂದು ನಿಮ್ಮ ಮೇಲೆ ದೋಷಾರೋಪಿಸಲಾಗಿದೆ.

ಐದನೆಯದಾಗಿ, ಅದೇ ದಿನ, ವೇಳೆ ಹಾಗೂ ಅದೇ ಸ್ಥಳದಲ್ಲಿ ಆರೋಪಿತರಾದ ತಾವು ಚಾಸಾ-1 ರವರನ್ನು ಕುರಿತು ನಿನ್ನನ್ನು ಬಿಡುವುದಿಲ್ಲ ಎಂದು ಕೊಲೆ ಬೆದರಿಕೆ ಹಾಕಿರುತ್ತೀರಿ. ಆದ ಕಾರಣ ತಾವು ಭಾರತೀಯ ದಂಡ ಸಂಹಿತೆ ಕಲಂ 506 ರಡಿಯಲ್ಲಿ ಅಪರಾಧವನ್ನು ಈ ನ್ಯಾಯಾಲಯದ ಸಂಜ್ಞೆತೆಯಲ್ಲಿ ಎಸಗಿರುತ್ತೀರೆಂದು ನಿಮ್ಮ ಮೇಲೆ ಆಪಾದಿಸಲಾಗಿದೆ.

ಮೇಲ್ಕಂಡ ನಿಮ್ಮ ಮೇಲಿನ ಆರೋಪಣೆಯ ಬಗ್ಗೆ ವಿಚಾರಣೆಯಾಗಲು ಈ ಮೂಲಕ ಆದೇಶಿಸುತ್ತೇನೆ.

(ರಘುರಾಮ ಎನ್.ಎಸ್.)
ಪ್ರಧಾನ ಸಿವಿಲ್ ನ್ಯಾಯಾಧೀಶರು
ಮತ್ತು ಪ್ರ.ದ.ನ್ಯಾ.ದಂ. ನಂಜನಗೂಡು.